## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 9520/2021 ಸಿ.ಡಬ್ಲ್ಯೂ –05 ಪಿ.ಡಬ್ಲ್ಯೂ -03

| | | |
|---|---|---|
| ಹೆಸರು | ಃ | ರಾಜು |
| ತಂದೆಃ ಗಂಡ | ಃ | ಹಣಮಂತರಾಯ |
| ವಯಸ್ಸು | ಃ | ೪೬ ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | ಃ | ಹಿತ್ತಲಶಿರೂರ |

ದಿನಾಂಕಃ೦೧.೧೨.೨೦೨೩

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸ.ಸ.ಅ ಅವರಿಂದ ಃ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-1 ರಿಂದ 4 ರವರ ಪರಿಚಯ ಇರುತ್ತದೆ. ಚಾಸಾ-6 ರಿಂದ 8 ರವರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಘಟನೆಯನ್ನು ಕಣ್ಣಾರೆ ನೋಡಿರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ಮತ್ತು ಮರು ಹೇಳಿಕೆಯನ್ನು ನೀಡಿರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ, ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ಈಗ ಓದಿ ಹೇಳಿದ ಹಾಗೆ ನಾನು ಪೋಲಿಸರಿಗೆ ಹೇಳಿಕೆ ಮತ್ತು ಮರು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿ ಅಲ್ಲ. ಸಾಕ್ಷಿ ಹೇಳಿಕೆಗೆ ಮತ್ತು ಮರುಹೇಳಿಕೆಗೆ ವ್ಯತಿರಿಕ್ತವಾಗಿ ನುಡಿದ ಕಾರಣ ಸದರಿ ಹೇಳಿಕೆಯನ್ನು ನಿಪಿ-೨ ಎಂದು, ಮರು ಹೇಳಿಕೆಯನ್ನು ನಿಪಿ-೩ ಎಂದು ಗುರುತಿಸಲಾಯಿತು. ಈಗ ಓದಿ ಹೇಳಿದ ಹಾಗೆ ಪೋಲಿಸರು ದಿ.09.10.2015 ರಂದು ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡರು, ಪಡೆದುಕೊಂಡಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಂ.ವಿ.ಇ ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ